**ಕರ್ನಾಟಕ ಸರ್ಕಾರ**

ನಂ.ಗ್ರಾಅಪ 20 ಗ್ರಾಪಂಕಾ 2014

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 23-01-2014

**ಸುತ್ತೋಲೆ**

ವಿಷಯ: ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ಮತ್ತ ಗ್ರೇಡ್-2 ವೃಂದದ ಹುದ್ದೆಗಳನ್ನು ಭರ್ತಿ ಮಾಡುವ ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳನ್ನು ತ್ವರಿತವಾಗಿ ಅನುಷ್ಠಾನಗೊಳಿಸಲು ಕ್ರಮ ವಹಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 19 ಗ್ರಾಪಂಕಾ 2012, ದಿನಾಂಕ: 13-01-2012.
2. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಗ್ರಾಅಪ 141 ಗ್ರಾಪಂಕಾ 2012, ದಿನಾಂಕ: 16-06-2012.
3. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 349 ಗ್ರಾಪಂಕಾ 2013, ದಿನಾಂಕ: 26-10-2013.

*-*-*-*-*

ಹಲವಾರು ಜಿಲ್ಲಾ ಪಂಚಾಯಿತಿಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪಾಲಿಸದಿರುವುದು, ರೋಸ್ಟರ್ ಪಾಲಿಸದಿರುವುದು, ಮಂಜೂರಾದ ಹುದ್ದೆಗಳಿಗಿಂತ ಹೆಚ್ಚಿನ ಹುದ್ದೆಗಳಿಗೆ ನೇಮಕಾತಿ/ಬಡ್ತಿ ನೀಡಿರುವುದು, ಅನುಕಂಪದ ಆಧಾರದ ನೇಮಕಾತಿಯನ್ನು ನೇರ ನೇಮಕಾತಿ ಕೋಟಾದ ಹುದ್ದೆಗಳ ಬದಲಿಗೆ ಬಡ್ತಿ ಕೋಟಾದ ಹುದ್ದೆಗಳಿಗೆ ನೇಮಿಸುವುದು ಇತ್ಯಾದಿ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಅನುಕಂಪದ ಆಧಾರಿತ ನೇಮಕಾತಿ ಪ್ರಸ್ತಾವನೆಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ವೃಂದಗಳಿಗೆ ಬಡ್ತಿ ನೀಡುವ ಮತ್ತು ಗ್ರೇಡ್-2 ಗ್ರಾಮ ಪಂಚಾಯಿತಿ ಕಾರ್ಯದರ್ಶಿ ವೃಂದಕ್ಕೆ ಬಿಲ್ ಕಲೆಕ್ಟರ್ ವೃಂದದಿಂದ ನೇಮಕಾತಿ ಮಾಡುವ ಪ್ರಸ್ತಾವನೆಗಳನ್ನು ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಪರಿಶೀಲಿಸಿ ಸರ್ಕಾರದ ಅನುಮೋದನೆ ಸಲ್ಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಉಲ್ಲೇಖ (1) ರ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಮತ್ತು ಗ್ರೇಡ್-2 ವೃಂದಕ್ಕೆ ಬಡ್ತಿ ನೀಡುವ ಮತ್ತು ಅನುಕಂಪದ ಆಧಾರಿತ ನೇಮಕಾತಿ ಪ್ರಸ್ತಾವನೆಗಳಿಗೆ ನಿಯಮಾನುಸಾರ ಜಿಲ್ಲಾ ಪಂಚಾಯಿತಿಯ ಹಂತದಲ್ಲೇ ಕ್ರಮ ವಹಿಸುವಂತೆ ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಉಲ್ಲೇಖ (2) ರ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು. ಅದರಂತೆ ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಮುಂಬಡ್ತಿ ಕೋಟಾದಡಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದಿಂದ ಬಡ್ತಿ, ಗ್ರೇಡ್-1 ಗ್ರಾಮ ಪಂಚಾಯಿತಿ ಕಾರ್ಯದರ್ಶಿ ವೃಂದಕ್ಕೆ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ವೃಂದದಿಂದ ಬಡ್ತಿ ಹಾಗೂ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ವೃಂದ ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗೆ ಬಿಲ್ ಕಲೆಕ್ಟರ್ ವೃಂದದಿಂದ ನೇಮಕಾತಿ ಮಾಡುವ ಸಂಬಂಧ ನೇಮಕಾತಿ ಪ್ರಾಧಿಕಾರವಾದ ಸಂಬಂಧಿಸಿದ ಜಿಲ್ಲೆಗಳ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳ ಹಂತದಲ್ಲಿಯೇ ಕ್ರಮ ವಹಿಸಲಾಗುತ್ತಿದೆ.

ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದಿಂದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಬಡ್ತಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ವೃಂದದಿಂದ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ವೃಂದಕ್ಕೆ ಬಡ್ತಿ ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ಹುದ್ದೆಗೆ ಬಿಲ್ ಕಲೆಕ್ಟರ್ ವೃಂದದಿಂದ ನೇಮಕಾತಿ ಮಾಡಲು ನೇರ ನೇಮಕಾತಿ ಕೋಟಾದಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ ಶೇಕಡಾ 50 ರಷ್ಟು ಹುದ್ದೆಗಳನ್ನು ಕಾಯ್ದಿರಿಸಿಕೊಂಡು, ಸದರಿ ವೃಂದಗಳ ಜೇಷ್ಠತಾ ಪಟ್ಟಿ, ಅರ್ಹ ನೌಕರರ ವಿವರ, ಮಂಜೂರಾದ ಹುದ್ದೆಗಳ ವಿವರ, ಒಂದು ವರ್ಷದಲ್ಲಿ ನಿವೃತ್ತರಾಗುವ ನೌಕರರ ವಿವರ ಇತ್ಯಾದಿಗಳೊಂದಿಗೆ ಸೂಕ್ತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿ, ಸರ್ಕಾರದ ಅನುಮೋದನೆ ಪಡೆದು ಸದರಿ ವೃಂದಗಳ ನೇರ ನೇಮಕಾತಿ ಕೋಟಾದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸುವಂತೆ ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಉಲ್ಲೇಖ (3) ರ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು.

ಜಿಲ್ಲಾ ಪಂಚಾಯಿತಿ ವ್ಯಾಪ್ತಿಗೆ ಬರುವ ಗ್ರಾಮ ಪಂಚಾಯಿತಿಗಳಲ್ಲಿನ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವೃಂದದ **ನೇರ ನೇಮಕಾತಿ ಕೋಟಾದ ಹುದ್ದೆಗಳು ಸೇರಿದಂತೆ ಒಟ್ಟು 1750 ಹುದ್ದೆಗಳಿಗೆ ಆಯ್ಕೆ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ವಹಿಸಲಾಗಿರುವುದರಿಂದ ಈ ಹುದ್ದೆಗಳನ್ನು ಹೊರತುಪಡಿಸಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗ್ರಾ.ಪಂ. ಕಾರ್ಯದರ್ಶಿ ಗ್ರೇಡ್-1 ಮತ್ತು ಗ್ರೇಡ್-2 ವೃಂದದ ನೇರ ನೇಮಕಾತಿ ಕೋಟಾದಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ ಶೇಕಡಾ 50 ರಷ್ಟು ಹುದ್ದೆಗಳನ್ನು ಕಾಯ್ದಿರಿಸಿಕೊಂಡು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದಿಂದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಬಡ್ತಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ವೃಂದದಿಂದ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ವೃಂದಕ್ಕೆ ಬಡ್ತಿ ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ಹುದ್ದೆಗೆ ಬಿಲ್ ಕಲೆಕ್ಟರ್ ವೃಂದದಿಂದ ನೇಮಕಾತಿ ಮಾಡಲು ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳು ಮತ್ತು ರೋಸ್ಟರ್ ಪಾಲಿಸಿಕೊಂಡು, ನಿಯಮಾನುಸಾರ ಕ್ರಮ ವಹಿಸುವಂತೆ ಹಾಗೂ ಮುಂದೆ ನಿವೃತ್ತಿ, ಬಡ್ತಿ ಇತ್ಯಾದಿ ಕಾರಣಗಳಿಂದ ತೆರವಾಗುವ ಹುದ್ದೆಗಳನ್ನು ಈಗಾಗಲೇ ಶೇ. 50**

ರ ನೇರ ನೇಮಕಾತಿ ಕೋಟಾದಡಿ ನೇಮಕಾತಿ/ಬಡ್ತಿ ಮಾಡಿರುವ ಹುದ್ದೆಗಳಿಗೆ ಸರದೂಗಿಸಿಕೊಳ್ಳತಕ್ಕದ್ದು. ಈ ರೀತಿ ಸರಿದೂಗಿಸಕೊಳ್ಳದ ಹೊರತು ಹೆಚ್ಚುವರಿಯಾಗಿ ಬಡ್ತಿಗಳನ್ನು ನೀಡಬಾರದು. ಈ ರೀತಿ ಬಡ್ತಿಗಳನ್ನು ನೀಡಲು ಜಿಲ್ಲಾ ಪಂಚಾಯಿತಿಗಳ ಹಂತದಲ್ಲೇ ಕ್ರಮ ವಹಿಸುವುದು. ಈ ಪ್ರಕ್ರಿಯೆಯನ್ನು ಪ್ರಾರಂಭಿಸಿ ದಿನಾಂಕ: 28-02-2014 ರೊಳಗೆ ಬಡ್ತಿಗಳನ್ನು ನೀಡಲು ಸೂಚಿಸಿದೆ.

ನೇರ ನೇಮಕಾತಿ ಕೋಟಾದ ಹುದ್ದೆಗಳು ಕಡಿಮೆಯಿದ್ದಲ್ಲಿ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ವಹಿಸಿರುವ ಹುದ್ದೆಗಳಷ್ಟನ್ನು ಕಡ್ಡಾಯವಾಗಿ ಕಾಯ್ದಿರಿಸಿಕೊಳ್ಳುವಂತೆ ಸೂಚಿಸಿದೆ ಹಾಗೂ ಈ ಹುದ್ದೆಗಳಿಗೆ ಎದುರಾಗಿ ಬಡ್ತಿ ನೀಡಬಾರದೆಂದೂ ಸಹ ತಿಳಿಸಿದೆ.

23/1/14

(ಕೆ.ಯಾಲಕ್ಕಿಗೌಡ)
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇವರಿಗೆ:

1. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
2. ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿ.